ಬಗೆಹರಿಸಿಕೊಡುತ್ತಿದ್ದರು ಎಂಬುದನ್ನು ಇಂದು ನೆನಪಿಸಿಕೊಳ್ಳುತ್ತೇನೆ. ಅವರ ಅಗಲಿಕೆಯಿಂದ ಅವರ ಕುಟುಂಬಕ್ಕೆ ಮಾತ್ರವಲ್ಲ ನಾಡಿಗೆ, ಕನ್ನಡ ಸಾಹಿತ್ಯಕ್ಕೆ ಬಹಳ ನಷ್ಟವಾಗಿದೆ. ಇಂಥ ಧೀಮಂತ ವ್ಯಕ್ತಿಗೆ ವೈಯಕ್ತಿಕವಾಗಿ ಮತ್ತು ಎಲ್ಲರ ಪರವಾಗಿ ಶ್ರದ್ಧಾಂಜಲಿಯನ್ನು ಅರ್ಪಿಸುತ್ತ ತಾವು ತಂದಿರುವ ಸಂತಾಪ ನಿರ್ಣಯಕ್ಕೆ ನಮ್ಮ ಪಕ್ಷದ ವತಿಯಿಂದಲೂ ಬೆಂಬಲವನ್ನು ಸೂಚಿಸುತ್ತೇನೆ.

ಅಧ್ಯಕ್ಷರು : ಈಗ ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದುನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕಾಗಿ ಕೋರುತ್ತೇನೆ.

(ಸದನವು ಎದ್ದುನಿಂತು ಒಂದು ನಿಮಿಷ ಮೌನವನ್ನು ಆಚರಿಸಿತು)

ಅಧ್ಯಕ್ಷರು : ಈ ನಿರ್ಣಯವನ್ನು ಮೃತರ ಕುಟುಂಬಕ್ಕೆ ಕಳುಹಿಸಿ ಕೊಡಲಾಗುವುದು. ಈಗ ಪ್ರಶ್ನೋತ್ತರಗಳು.

ಪ್ರಶ್ನೋತ್ತರ

ಚುಕ್ಕೆ ಗುರ್ತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು

ರೋಣದಲ್ಲಿ ಅಡಿಷನಲ್ ಸಿವಿಲ್ ನ್ಯಾಯಾಲಯ

574 - ಶ್ರೀ ಗುರುಪಾದ ಗೌಡ ಸಂಗನಗೌಡ ಪಾಟೀಲ್ (ರೋಣ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗದಗದಲ್ಲಿ ಈಗಾಗಲೇ ಜಿಲ್ಲಾ ನ್ಯಾಯಾಲಯ ಆರಂಭಿಸಲಾಗಿರುವುದು ನಿಜವಲ್ಲವೇ?*

ಆ) *ರೋಣ, ನರಗುಂದ ಭಾಗದ ಜನತೆಗೆ ಅನುಕೂಲವಾಗುವ ದೃಷ್ಟಿಯಿಂದ ರೋಣದಲ್ಲಿ ಅಡಿಷನಲ್ ಸಿವಿಲ್ ಜಡ್ಜ್ ನ್ಯಾಯಾಲಯ ಆರಂಭಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?*

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು) :

ಅ) ಹೌದು, ದಿನಾಂಕ 30.9.2000ದಲ್ಲಿ ಗದಗ್ ಜಿಲ್ಲಾ ನ್ಯಾಯಾಲಯ ಪ್ರಾರಂಭವಾಗಿದೆ.

ಆ) ಸರ್ಕಾರದ ಮಟ್ಟದಲ್ಲಿ ಇಂತಹ ಪ್ರಸ್ತಾವನೆ ಇರುವುದಿಲ್ಲ.

11.30 ಎ.ಎಂ.

ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ್ : ಮಾನ್ಯ ಅಧ್ಯಕ್ಷರೇ, ರೋಣದಲ್ಲಿ ಮತ್ತೊಂದು ಅಡಿಷನಲ್ ಸಿವಿಲ್ ಕೋರ್ಟ್ ಅನ್ನು ಅಲ್ಲಿಯ ಜನತೆಯ ಹಿತದೃಷ್ಟಿಯಿಂದ ಆರಂಭಿಸಬೇಕೆಂದು ಇವತ್ತು ತಮ್ಮ ಮೂಲಕ ಸರ್ಕಾರಕ್ಕೆ ಒತ್ತಾಯವನ್ನು ಮಾಡುತ್ತಿದ್ದೇನೆ. ರೋಣ ಮತ್ತು ನರಗುಂದ

ಎರಡೂ ತಾಲ್ಲೂಕುಗಳಿಂದ ಒಟ್ಟಾರೆ ಸುಮಾರು 6321 ಕೇಸ್‌ಗಳು ಈಗಾಗಲೇ ದಾಖಲಾಗಿವೆ. ನರಗುಂದದಿಂದ ಇವತ್ತು ಗದಗ್‌ಗೆ ಹೋಗಬೇಕಾದರೆ ಸುಮಾರು 80 ಕಿ.ಮೀ ದೂರ ಹೋಗುವಂತಹ ಒಂದು ವ್ಯವಸ್ಥೆ ಇದೆ. ಜನತೆಗೆ ಅನುಕೂಲವಾಗಬೇಕೆಂಬ ದೃಷ್ಟಿಯಿಂದ ರೋಣದಲ್ಲಿ ಅಡಿಷನಲ್ ಸಿವಿಲ್ ಕೋರ್ಟ್ ಅನ್ನು ಪ್ರಾರಂಭ ಮಾಡಬೇಕೆಂದು ತಮ್ಮ ಮೂಲಕ ಸರ್ಕಾರಕ್ಕೆ ಒತ್ತಾಯಿಸುತ್ತಿದ್ದೇನೆ.

ಶ್ರೀ ಡಿ.ಬಿ. ಚಂದ್ರೇಗೌಡ : ಮಾನ್ಯ ಅಧ್ಯಕ್ಷರೇ, ಈ ದಿಸೆಯಲ್ಲಿ ರಾಜ್ಯ ಉಚ್ಚ ನ್ಯಾಯಾಲಯದಿಂದ ಸರ್ಕಾರಕ್ಕೆ ಯಾವುದೇ ಪ್ರಸ್ತಾವನೆ ಬಂದಿಲ್ಲ. ಉಚ್ಚ ನ್ಯಾಯಾಲಯದಿಂದ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಬಂದರೆ ಸರ್ಕಾರ ಅದನ್ನು ಮಾನ್ಯತೆ ಮಾಡುತ್ತದೆ ಎಂದು ಮಾನ್ಯ ಸದಸ್ಯರಿಗೆ ತಿಳಿಸಬಯಸುತ್ತೇನೆ.

ಶ್ರೀ ಕೆ.ಬಿ. ಕೋಳಿವಾಡ್ : ಮಾನ್ಯ ಅಧ್ಯಕ್ಷರೇ, ಗದಗ್ ಮತ್ತು ಹಾವೇರಿ ಎರಡೂ ಕಡೆಗೆ ಒಂದೇ ವೇಳೆಗೆ ಜಿಲ್ಲಾ ನ್ಯಾಯಾಲಯ ಮಂಜೂರಾಗಿದ್ದರೂ ಸಹಿತ ಹಾವೇರಿಯಲ್ಲಿ ಇನ್ನೂ ಏಕೆ ಜಿಲ್ಲಾ ನ್ಯಾಯಾಲಯವನ್ನು ಪ್ರಾರಂಭ ಮಾಡಿರುವುದಿಲ್ಲ ಎಂದು ಮಾನ್ಯ ಮಂತ್ರಿಗಳು ಉತ್ತರಿಸುವರೆ?

ಶ್ರೀ ಡಿ.ಬಿ. ಚಂದ್ರೇಗೌಡ : ಮಾನ್ಯ ಅಧ್ಯಕ್ಷರೇ, ಟೆರಿಟೋರಿಯಲ್ ಜ್ಯೂರಿಸ್‌ಡಿಕ್ಷನ್ ಅನ್ನು ಹೈಕೋರ್ಟ್‌ನವರು ನಿಗದಿ ಮಾಡಬೇಕು. ಈಗ ಆ ಪ್ರಕ್ರಿಯೆಯೂ ಕೂಡ ಮುಗಿದಿದೆ. ಕಟ್ಟಡ ಮತ್ತು ಉಳಿಕೆ ವಿಚಾರಗಳ ಬಗ್ಗೆ ಸರ್ಕಾರ ಸೌಲಭ್ಯ ಒದಗಿಸಿಕೊಡಬೇಕು. ಈಗಾಗಲೇ ಮೂರು ಜಿಲ್ಲಾ ನ್ಯಾಯಾಲಯಗಳನ್ನು ಪ್ರಾರಂಭ ಮಾಡಿದ್ದೇವೆ. ಬಾಗಲಕೋಟೆ ಮತ್ತು ಹಾವೇರಿಗಳಲ್ಲಿ ಸಧ್ಯದಲ್ಲೇ ಮಾಡುವುದಕ್ಕೆ ನಾವು ಸಿದ್ಧರಾಗಿದ್ದೇವೆ.

ಮಂಡ್ಯ ನಗರಕ್ಕೆ ವರ್ತುಲ ರಸ್ತೆ ಮತ್ತು ಮೇಲು ಸೇತುವೆ

575 - ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಂಡ್ಯ ನಗರಕ್ಕೆ ವರ್ತುಲ ರಸ್ತೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸರ್ಕಾರ ಈ ಬಗೆಗೆ ಯಾವ ಕ್ರಮ ಕೈಗೊಂಡಿದೆ?*

ಇ) *ಮಂಡ್ಯ ನಗರದ ಮಧ್ಯ ಭಾಗದಲ್ಲಿ ಹಾದು ಹೋಗುವ ರೈಲ್ವೆ ಹಳಿಯ ಮೇಲೆ ಮೇಲು ಸೇತುವೆ ಅಥವಾ ಫ್ಲೈ ಓವರ್ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?*

ಶ್ರೀ ಧರಮ್ ಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಇಲ್ಲ. ಆದಾಗ್ಯೂ ಮಂಡ್ಯ ನಗರದ ಹಳೆ ಎಂ.ಸಿ. ರಸ್ತೆಯನ್ನು ಅಭಿವೃದ್ಧಿಪಡಿಸ ಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಎಂ.ಸಿ. ರಸ್ತೆ ಅಭಿವೃದ್ಧಿಪಡಿಸುವ ಸಲುವಾಗಿ ವಿನ್ಯಾಸ ಹಾಗೂ ಅಂದಾಜು ತಯಾರಿಸಲಾಗುತ್ತಿದೆ.